# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 232 (200)
2. ಸದಸ್ಯರ ಹೆಸರು : ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸುವ ದಿನಾಂಕ : 13.09.2022
4. ಉತ್ತರಿಸುವ ಸಚಿವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
| --- | --- | --- |
| (ಅ) | ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಹುಲಿಮಂಗಲ ಗ್ರಾಮದ ಸ.ನಂ. 346 ಮತ್ತು 349ರ ಜಮೀನುಗಳ ಸ್ವಾಧೀನಪಡಿಸಿದ್ದು ಈವರೆಗೂ ಸರ್ಕಾರ ಯಾವುದೇ ಅಭಿವೃದ್ಧಿ ಕೈಗೊಂಡಿಲ್ಲದಿರುವುದಕ್ಕೆ ಕಾರಣವೇನು; (ಸಂಪೂರ್ಣ ಮಾಹಿತಿ ನೀಡುವುದು) | ಬೊಮ್ಮಸಂದ್ರ ಕೈಗಾರಿಕಾ ಪ್ರದೇಶದಿಂದ ಬೊಮ್ಮಸಂದ್ರ 4ನೇ ಹಂತ ಮತ್ತು ಎಲೆಕ್ಟ್ರಾನಿಕ್ ಸಿಟಿ 1ನೇ ಹಂತದ ಕೈಗಾರಿಕಾ ಪ್ರದೇಶಕ್ಕೆ ಸಂಪರ್ಕ ರಸ್ತೆ ಕಲ್ಪಿಸುವ ಸಲುವಾಗಿ ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಹುಲಿಮಂಗಲ ಗ್ರಾಮದ ಸರ್ವೆ ನಂ: 346 ಮತ್ತು 349 ರಲ್ಲಿನ ಒಟ್ಟು 3-09 ಎಕರೆ ಜಮೀನಿಗೆ ಪ್ರಾಥಮಿಕ ಅಧಿಸೂಚನೆಯನ್ನು ದಿನಾಂಕ: 20.12.2010ರಂದು ಹೊರಡಿಸಲಾಗಿದೆ.<br><br>ಬೊಮ್ಮಸಂದ್ರ ಕೈಗಾರಿಕಾ ಪ್ರದೇಶ ಮತ್ತು ಎಲೆಕ್ಟ್ರಾನಿಕ್ ಸಿಟಿ ಕೈಗಾರಿಕಾ ಪ್ರದೇಶಗಳಿಗೆ ಆನೇಕಲ್ ರಸ್ತೆ ಮತ್ತು ರಾಷ್ಟ್ರೀಯ ಹೆದ್ದಾರಿ-7, ಹೊಸೂರು ರಸ್ತೆಯಿಂದ ಸಂಪರ್ಕವಿರುವುದಾಗಿ ತಿಳಿಸಿ, ಹುಲಿಮಂಗಲ ಗ್ರಾಮದ ಸರ್ವೆ ನಂ: 346 ಮತ್ತು 349ರ ಜಮೀನು ಮಂಡಳಿಯ ಇತರೆ ಉದ್ದೇಶಗಳಿಗೆ ಅವಶ್ಯವಿರುವ ಬಗ್ಗೆ ಕೇಂದ್ರ ಕಛೇರಿಯ ಮಟ್ಟದಲ್ಲಿ ತೀರ್ಮಾನ ಕೈಗೊಳ್ಳಬಹುದೆಂದು ಕೆ.ಐ.ಎ.ಡಿ.ಬಿ.ಯ ವಿಶೇಷ ಭೂಸ್ವಾಧೀನಾಧಿಕಾರಿ ಮತ್ತು ಕಾರ್ಯಪಾಲಕ ಅಭಿಯಂತರರು ವರದಿ ಮಾಡಿದ ಹಿನ್ನೆಲೆಯಲ್ಲಿ ಪ್ರಸ್ತಾವಿತ ಭೂಸ್ವಾಧೀನ ಪ್ರಕ್ರಿಯೆಯ ವಿಷಯವನ್ನು |
| (ಆ) | ಅಧಿಸೂಚನೆ ಹೊರಡಿಸಿರುವ ಹುಲಿಮಂಗಲ ಗ್ರಾಮದ ಜಮೀನುಗಳನ್ನು ಮಂಡಳಿಯ ಇತರೆ ಉದ್ದೇಶಗಳಿಗೆ ಅವಶ್ಯಕತೆ ಇರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಸಂಪೂರ್ಣ ಮಾಹಿತಿ ನೀಡುವುದು) | |
| (ಇ) | ಹುಲಿಮಂಗಲ ಗ್ರಾಮದ ಜನತೆಗೆ ಉದ್ಯೋಗವನ್ನು ನೀಡಲು ತಮ್ಮ ಜಮೀನುಗಳನ್ನು ಅಭಿವೃದ್ಧಿ ಮಾಡಲು ಜಮೀನುಗಳ ಮಾಲೀಕರಿಗೆ ಅವಕಾಶವನ್ನು ಸರ್ಕಾರ ನೀಡುತ್ತಿಲ್ಲದಿರುವುದಕ್ಕೆ ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | |

| | | |
|---|---|---|
| (ಈ) | ಇದನ್ನು ಸರ್ಕಾರ ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸುವುದು? | ದಿನಾಂಕ: 09.06.2022 ರಂದು ನಡೆದ ಮಂಡಳಿ ಸಭೆಯಲ್ಲಿ ಮಂಡಿಸಲಾಗಿದ್ದು, ಸದರಿ ವಿಷಯವು ಮುಂದೂಡಲ್ಪಟ್ಟಿರುತ್ತದೆ. |

ಸಂಖ್ಯೆ: ಸಿಐ 213 ಐಎಪಿ (ಇ) 2022

(ಡಾ|| ಮುರುಗೇಶ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು